# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 214 |
| ಸದಸ್ಯರ ಹೆಸರು | ಶ್ರೀ ಕೆ.ವಿ.ವಿವೇಕಾನಂದ |
| ಉತ್ತರಿಸುವ ದಿನಾಂಕ | 28.01.2026 |
| ಉತ್ತರಿಸುವವರು | ಸಾರಿಗೆ ಮತ್ತು ಮುಜರಾಯಿ ಸಚಿವರು |

********

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಮುಜರಾಯಿ ಇಲಾಖೆ ವ್ಯಾಪ್ತಿಯ ದೇವಾಲಯಗಳಲ್ಲಿ ದಿನನಿತ್ಯ ದಾಸೋಹ ನಡೆಯುತ್ತಿರುವ ದೇವಾಲಯಗಳ ಸಂಖ್ಯೆ ಎಷ್ಟು; ಅವುಗಳು ಯಾವುವು; (ತಾಲ್ಲೂಕುವಾರು ಮಾಹಿತಿ ನೀಡುವುದು) | ರಾಜ್ಯದ ಮುಜರಾಯಿ ಇಲಾಖೆ ವ್ಯಾಪ್ತಿಯ ಒಟ್ಟು 83 ದೇವಾಲಯಗಳಲ್ಲಿ ದಿನನಿತ್ಯ ದಾಸೋಹ ನಡೆಯುತ್ತಿರುತ್ತದೆ. ಸದರಿ ದೇವಾಲಯಗಳ ತಾಲ್ಲೂಕುವಾರು ಮಾಹಿತಿಯನ್ನು **ಅನುಬಂಧ**ದಲ್ಲಿ ಒದಗಿಸಿದೆ. |
| ಆ) | ಇಂತಹ ದಾಸೋಹ ನಡೆಯುತ್ತಿರುವ ದೇವಾಲಯಗಳಿಂದ ಈ ಭಾಗದ ಸುತ್ತಮುತ್ತಲಿನ ಸರ್ಕಾರಿ ಮತ್ತು ಅನುದಾನಿತ ಶಾಲಾ ಮಕ್ಕಳಿಗೆ ಬಿಸಿಯೂಟದ ವ್ಯವಸ್ಥೆ ಮಾಡಲಾಗುತ್ತಿದೆಯೇ; (ವಿವರ ನೀಡುವುದು) | ಧಾರ್ಮಿಕ ದತ್ತಿ ಇಲಾಖಾ ವ್ಯಾಪ್ತಿಯಲ್ಲಿ ಬರುವ ದೇವಾಲಯಗಳಲ್ಲಿ ದಿನನಿತ್ಯ ದಾಸೋಹ ನಡೆಸುತ್ತಿರುವ ದೇವಾಲಯಗಳಿಂದ ಸುತ್ತಮುತ್ತಲಿನ ಸರ್ಕಾರಿ ಮತ್ತು ಅನುದಾನಿತ ಶಾಲಾ ಮಕ್ಕಳಿಗೆ ಬಿಸಿಯೂಟದ ವ್ಯವಸ್ಥೆ ಮಾಡಲಾಗಿರುವುದಿಲ್ಲ. |
| ಇ) | ಸರ್ಕಾರ ಈ ದೇವಾಲಯಗಳಿಂದ ಆ ಭಾಗದ ಸರ್ಕಾರಿ ಶಾಲಾ ಮಕ್ಕಳಿಗೆ ಮಧ್ಯಾಹ್ನ ಬಿಸಿಯೂಟ ವ್ಯವಸ್ಥೆಯನ್ನು ಜಾರಿಗೆ ತರಲು ಯಾವ ಕ್ರಮವನ್ನು ಕೈಗೊಂಡಿದೆ? | ಈ ದೇವಾಲಯಗಳಿಂದ ಆ ಭಾಗದ ಸರ್ಕಾರಿ ಶಾಲಾ ಮಕ್ಕಳಿಗೆ ಮಧ್ಯಾಹ್ನ ಬಿಸಿಯೂಟ ವ್ಯವಸ್ಥೆಯನ್ನು ಜಾರಿಗೆ ತರುವಂತಹ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |

ಸಂಖ್ಯೆ: ಕಂಇ 13 ಮುಸಪ್ರ 2026

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು